# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೀದರ್ (ರಕ್ಷಣಾ) ವಿಮಾನ ನಿಲ್ದಾಣದ ಸಿವಿಲ್ ಎನ್‌ಕ್ಲೇವ್ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚವನ್ನು ಭರಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 113 ಡಿಐಎ 2012, ದಿನಾಂಕ:10.04.2018.

2.ರಾಜ್ಯ ಸರ್ಕಾರ ಹಾಗೂ ಮೆ: ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತದೊಂದಿಗೆ ಮಾಡಿಕೊಂಡಿರುವ ಒಪ್ಪಂದ ದಿನಾಂಕ:30.01.2020.

3. ಸರ್ಕಾರದ ಆದೇಶ ಸಂಖ್ಯೆ: ಮೂಅಇ 93 ರಾಅವಿ 2020, ದಿನಾಂಕ:29.09.2021.

4. ವ್ಯವಸ್ಥಾಪಕ ನಿರ್ದೇಶಕರು ಕೆಎಸ್ಐಐಡಿಸಿ ಇವರ ಪತ್ರ ಸಂಖ್ಯೆ: ಐಪಿಡಿ-1/419/1791/2021-22, ದಿನಾಂಕ: 04/02/2022.

5. ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 22 ಯುಐಪಿ 2020, ದಿನಾಂಕ:15.04.2021.

6. ಆರ್ಥಿಕ ಇಲಾಖೆ ಟಿಪ್ಪಣಿ ಸಂಖ್ಯೆ: ಆಇ 142 ವೆಚ್ಚ-1/2021, ದಿನಾಂಕ: 13.12.2022.

******

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ಆದೇಶದಲ್ಲಿ ಬೀದರ್ (ರಕ್ಷಣಾ) ವಿಮಾನ ನಿಲ್ದಾಣದ ಸಿವಿಲ್ ಎನ್‌ಕ್ಲೇವ್ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತದೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳಲು ಮಂಜೂರಾತಿ ನೀಡಲಾಗಿದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಬೀದರ್ (ರಕ್ಷಣಾ) ವಿಮಾನ ನಿಲ್ದಾಣದ ಸಿವಿಲ್ ಎನ್‌ಕ್ಲೇವ್ ಕಾರ್ಯಾಚರಣೆ ಹಾಗೂ ನಿರ್ವಹಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ಪರವಾಗಿ ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್ ಹಾಗೂ ಮೆ: ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತದೊಂದಿಗೆ ಒಪ್ಪಂದವನ್ನು ಮಾಡಿಕೊಳ್ಳಲಾಗಿದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ದಿನಾಂಕ:04/02/2022ರ ಆದೇಶದಲ್ಲಿ ಬೀದರ್ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್ ಇವರೊಂದಿಗೆ ದಿನಾಂಕ:30.01.2020ರಂದು ಮಾಡಿಕೊಂಡಿರುವ ಒಪ್ಪಂದದನ್ವಯ ಬೀದರ್

ಪುಟ 2ಕ್ಕೆ

01/04/22

ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚವನ್ನು ರಾಜ್ಯ ಸರ್ಕಾರವು ಭರಿಸಬೇಕಾಗಿರುವ ರೂ.252.50 ಲಕ್ಷಗಳಲ್ಲಿ, ರೂ.100.00 ಲಕ್ಷಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ನಿಯಮಿತದ ಮೂಲಕ ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತಕ್ಕೆ ಭರಿಸಲು ಆದೇಶಿಸಲಾಗಿದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ದಿನಾಂಕ:04/02/2022ರ ವ್ಯವಸ್ಥಾಪಕ ನಿರ್ದೇಶಕರು, ಕೆಎಸ್‌ಐಐಡಿಸಿ ಇವರ ಪತ್ರದಲ್ಲಿ ಬೀದರ್ ವಾಯುಪಡೆಯ ನಾಗರಿಕ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚಕ್ಕಾಗಿ 2020-21ನೇ ಸಾಲಿನ ಸುಮಾರು ರೂ 155.00 ಲಕ್ಷ ಹಾಗೂ 2021-22ನೇ ಸಾಲಿನ ಉಳಿದ ಎರಡು ತ್ರೈಮಾಸಿಕಗಳ Opex & CAPEX ಒಟ್ಟು ಮೊತ್ತವಾದ ರೂ 268.31 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

5. ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ದಿನಾಂಕ:15/04/2021ರ ಆದೇಶದಲ್ಲಿ 2021-22ನೇ ಆರ್ಥಿಕ ಸಾಲಿಗೆ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ. ಇದರಲ್ಲಿ ಲೆಕ್ಕ ಶೀರ್ಷಿಕೆ 3451-00-090-1-11-071 - Development of Minor Airports - Building Expenses ರಡಿ 100.00 ಲಕ್ಷಗಳನ್ನು ಒದಗಿಸಲಾಗಿದೆ.

6. ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಲೆಕ್ಕ ಶೀರ್ಷಿಕೆ 3451-00-090-1-11-071 - "Development of Minor Airports - Building Expenses" ರಡಿ ಬೀದರ್ ವಾಯುಪಡೆಯ ನಾಗರಿಕ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣೆಗೆ 2020-21ರ ವರೆಗಿನ CAPEX / OPEX ಗೆ ಸಂಬಂಧಿಸಿದಂತೆ ಬಾಕಿ ಮೊತ್ತ ರೂ.153.96 ಲಕ್ಷಗಳನ್ನು ಮತ್ತು 2021-22ನೇ ಸಾಲಿನ CAPEX / OPEX ಮತ್ತು Operator Fees ಸೇರಿ ಒಟ್ಟು ರೂ.125.23 ಲಕ್ಷಗಳನ್ನು ಒಟ್ಟಾರೆ ರೂ.279.19 ಲಕ್ಷಗಳನ್ನು ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯು ಪೂರಕ ಅಂದಾಜು-2ರಲ್ಲಿ ಅನುದಾನವನ್ನು ಒದಗಿಸಲಾಗಿರುತ್ತದೆ. ಅದರಂತೆ, ಆರ್ಥಿಕ ಇಲಾಖೆಯು ಪೂರಕ ಅಂದಾಜಿನಲ್ಲಿ ಒದಗಿಸಿರುವ ಅನುದಾನವನ್ನು ಬೀದರ್ ವಾಯುಪಡೆಯ ನಾಗರಿಕ ವಿಮಾನ ನಿಲ್ದಾಣದ ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚವನ್ನು ಪಾವತಿಸುವ ಸಲುವಾಗಿ ಬಳಸಿಕೊಳ್ಳಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

7. ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಮೂಅಇ 93 ರಾಅವಿ 2020**
**ಬೆಂಗಳೂರು, ದಿನಾಂಕ:30ನೇ ಮಾರ್ಚ್ 2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೀದರ್ (ರಕ್ಷಣಾ) ವಿಮಾನ ನಿಲ್ದಾಣದ ಸಿವಿಲ್ ಎನ್‌ಕ್ಲೇವ್ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕುರಿತು ರಾಜ್ಯ ಸರ್ಕಾರ ಹಾಗೂ ಮೆ: ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್

ಪುಟ 3ಕ್ಕೆ

ಏರ್‌ಪೋರ್ಟ್ ನಿಯಮಿತ, ಇವರೊಂದಿಗೆ ಮಾಡಿಕೊಂಡಿರುವ ಒಪ್ಪಂದದನ್ವಯ ಲೆಕ್ಕ ಶೀರ್ಷಿಕೆ 3451-00-090-1-11-071 - "Development of Minor Airports Building Expenses" ರಡಿ 2020-21ರ ವರೆಗಿನ CAPEX / OPEX ಗೆ ಸಂಬಂಧಿಸಿದಂತೆ ಬಾಕಿ ಮೊತ್ತ ರೂ.153.96 ಲಕ್ಷಗಳನ್ನು ಮತ್ತು 2021-22ನೇ ಸಾಲಿನ CAPEX / OPEX ಮತ್ತು Operator Fees ಸೇರಿ ಒಟ್ಟು ರೂ.125.23 ಲಕ್ಷಗಳನ್ನು ಒಟ್ಟಾರೆ ರೂ.2,79,19,000.00 (ಎರಡು ಕೋಟಿ ಎಪ್ಪತ್ತೊಂಬತ್ತು ಲಕ್ಷದ ಹತ್ತೊಂಬತ್ತು ಸಾವಿರ ರುಪಾಯಿಗಳು ಮಾತ್ರ) ಅನುದಾನವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ ನಿಯಮಿತದ ಮೂಲಕ ಜಿ.ಎಮ್.ಆರ್. ಹೈದರಾಬಾದ್ ಇಂಟರ್ ನ್ಯಾಷನಲ್ ಏರ್‌ಪೋರ್ಟ್ ನಿಯಮಿತಕ್ಕೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

2. **ಷರತ್ತುಗಳು**

- ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡತಕ್ಕದ್ದು. ಹಾಗೂ ಇದೇ ಉದ್ದೇಶಕ್ಕೆ ಈಗಾಗಲೇ ವೆಚ್ಚ ಮಾಡಿದ್ದಲ್ಲಿ ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಬಳಕೆ ಮಾಡುವಂತಿಲ್ಲ.

- ಬಿಡುಗಡೆ ಮಾಡಿರುವ ಅನುದಾನವನ್ನು ಬೀದರ್ (ರಕ್ಷಣಾ) ವಿಮಾನ ನಿಲ್ದಾಣದ ಸಿವಿಲ್ ಎನ್‌ಕ್ಲೇವ್ ಕಾರ್ಯಾಚರಣೆ ಮತ್ತು ನಿರ್ವಹಣೆಯ ಬಿಲ್‌ಗಳನ್ನು ಪಾವತಿಸಲು ಮಾತ್ರ ಬಳಕೆ ಮಾಡತಕ್ಕದ್ದು.

- ಮೆ: ಜಿ.ಎಮ್.ಆರ್. ಹೈದರಾಬಾದ್ ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ನಿಯಮಿತದಿಂದ ಸ್ವೀಕೃತವಾಗುವ ಬಿಲ್ಲುಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಖಚಿತಪಡಿಸಿಕೊಂಡು ಬಿಡುಗಡೆ ಮಾಡತಕ್ಕದ್ದು.

- ಅನುದಾನ ಬಳಕೆ ಬಗ್ಗೆ ನಿಗಧಿತ ನಮೂನೆಯಲ್ಲಿ ಉಪಯೋಗಿ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

3. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "3451-00-090-1-11-071" Development of Minor Airports - Building Expenses ರಡಿಯಲ್ಲಿ 2021-22ನೇ ಸಾಲಿನಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

4. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ., ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ಸೆಳೆಯಲು ಅನುಮತಿಸಿದೆ.

ಪುಟ 4ಕ್ಕೆ

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/1/ ಟಿಎಫ್‌ಪಿ/ 2021, ದಿನಾಂಕ:31/12/2021 ರಲ್ಲಿ ಇಲಾಖಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Kai

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರು
ಮತ್ತು ಒಳನಾಡು ಜಲಸಾರಿಗೆ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಆಡಿಟ್-1,2,3A & E), ಪ್ರಧಾನ ಮಹಾಲೇಖಪಾಲರ ಕಛೇರಿ, ಎಎಡಿ ಸೆಕ್ಷನ್, ಕೆ.ಪಿ.ಎಸ್.ಸಿ.ಕಚೇರಿ ಎದುರು, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
3. ಜಿಲ್ಲಾಧಿಕಾರಿ, ಬೀದರ್ ಜಿಲ್ಲೆ, ಬೀದರ್
4. ಮುಖ್ಯ ಹಣಕಾಸು ಅಧಿಕಾರಿ, ಜಿ.ಹೆಚ್.ಐ.ಎ.ಎಲ್, ಹೈದ್ರಾಬಾದ್.
5. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
6. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
7. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಇಲಾಖೆ, ಬೆಂಗಳೂರು.
8. ನಿರ್ದೇಶಕರು, PM & I ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
9. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ, ಖನಿಜಭವನ, ಬೆಂಗಳೂರು.
10 ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನಸೌಧ, ಬೆಂಗಳೂರು.

**ಪ್ರತಿ**:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.

2. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸಸೌಧ, ಬೆಂಗಳೂರು.

3. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ, ವೆಬ್ ಸೈಟ್ ನಲ್ಲಿ ಪ್ರಕಟಿಸಲು.

4. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.